**All India Radio: Bangalore**
**National Bulletin In Kannada**
**30.08.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**30.08.2025 19.35 p.m.**
**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನ ಚೀನಾ ಭೇಟಿ ; ಜಾಗತಿಕ ನಾಯಕರೊಂದಿಗೆ ಮಾತುಕತೆ
2. ಹನ್ನೊಂದು ವರ್ಷದಲ್ಲಿ ಭಾರತದ ಎಲೆಕ್ಟ್ರಾನಿಕ್ಸ್ ಉತ್ಪಾದನೆ ೬ ಪಟ್ಟು ಹೆಚ್ಚಳ - ಸಚಿವ ಅಶ್ವಿನಿ ವೈಷ್ಣವ್
3. ರಕ್ಷಣೆಯಲ್ಲಿ ಸ್ವಾವಲಂಬನೆ ಕೇವಲ ಆಯ್ಕೆಯಲ್ಲ, ಅಸ್ತಿತ್ವ ಮತ್ತು ಪ್ರಗತಿಯ ಬದ್ಧತೆ ; ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂಗಿತ
4. ನಾಳೆ ಮನ್ ಕಿ ಬಾತ್‌ನ ೧೨೫ನೇ ಸಂಚಿಕೆ ; ದೇಶ-ವಿದೇಶದ ಭಾರತೀಯರೊಂದಿಗೆ ಪ್ರಧಾನಿ ಮನದ ಮಾತು

<><><><>

ನಾಳೆ ಆರಂಭವಾಗಲಿರುವ ಶಾಂಘೈ ಸಹಕಾರ ಸಂಸ್ಥೆಯ ೨೫ನೇ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಚೀನಾದ ಟಿಯಾಂಜಿನ್ ತಲುಪಿದ್ದಾರೆ. ಪ್ರಧಾನಿ ಎರಡು ದಿನಗಳ ಚರ್ಚೆಗಳಲ್ಲಿ ಜಾಗತಿಕ ನಾಯಕರೊಂದಿಗೆ ಭಾಗವಹಿಸಲಿದ್ದಾರೆ. ಅವರು ಇತರ ಜಾಗತಿಕ ನಾಯಕರೊಂದಿಗೆ ಪ್ರಾದೇಶಿಕ ಭದ್ರತೆ, ಸಂಪರ್ಕ, ಸುಸ್ಥಿರ ಅಭಿವೃದ್ಧಿ ಮತ್ತು ಜಾಗತಿಕ ಸಹಕಾರದಂತಹ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಶೃಂಗಸಭೆಯು ಸಂಸ್ಥೆಯ ೨೫ ವರ್ಷಗಳ ಸಾಧನೆಗಳನ್ನು ಪರಿಶೀಲಿಸುತ್ತದೆ ಮತ್ತು ಹತ್ತು ವರ್ಷಗಳ ಅಭಿವೃದ್ಧಿ ಕಾರ್ಯತಂತ್ರವನ್ನು ಸಹ ಅಳವಡಿಸಿಕೊಳ್ಳುತ್ತದೆ. ಚೀನಾ ಐದನೇ ಬಾರಿಗೆ ಈ ಶೃಂಗಸಭೆಯನ್ನು ಆಯೋಜಿಸುತ್ತಿದ್ದು, ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅಧ್ಯಕ್ಷತೆ ವಹಿಸಿದ್ದಾರೆ. ೨೦ಕ್ಕೂ ಹೆಚ್ಚು ರಾಷ್ಟ್ರಗಳ ಮುಖ್ಯಸ್ಥರು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ೧೦ ನಾಯಕರು ಭಾಗವಹಿಸುವ ನಿರೀಕ್ಷೆಯಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಪ್ರಮುಖ ಭಾಗವಹಿಸುವವರಲ್ಲಿ ಸೇರಿದ್ದಾರೆ.

<><><><>

ಕಳೆದ ೧೧ ವರ್ಷಗಳಲ್ಲಿ, ಭಾರತದಲ್ಲಿ ಎಲೆಕ್ಟ್ರಾನಿಕ್ಸ್ ಉತ್ಪಾದನೆಯು ಆರು ಪಟ್ಟು ಬೆಳೆದು ೧೧ ಲಕ್ಷ ೫೦ ಸಾವಿರ ಕೋಟಿ ಉತ್ಪಾದನಾ ಮೌಲ್ಯವನ್ನು ತಲುಪಿದೆ. ೩ ಲಕ್ಷ ಕೋಟಿಗೂ ಹೆಚ್ಚು ರಫ್ತು ಮತ್ತು ೨೫ ಲಕ್ಷ ಜನರಿಗೆ ನೇರ ಮತ್ತು ಪರೋಕ್ಷ ಉದ್ಯೋಗಾವಕಾಶವಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದರು. ಉತ್ತರ ಪ್ರದೇಶದ ನೋಯ್ಡಾದಲ್ಲಿ ಮೊಬೈಲ್ ಸಾಧನಗಳಿಗಾಗಿ ಭಾರತದ ಮೊದಲ ಟೆಂಪರ್ಡ್ ಗ್ಲಾಸ್ ಉತ್ಪಾದನಾ ಸೌಲಭ್ಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಟೆಂಪರ್ಡ್ ಗ್ಲಾಸ್ ಮೊಬೈಲ್ ಫೋನ್‌ಗಳಿಗೆ ಪ್ರಮುಖ ಪರಿಕರವಾಗಿದೆ ಮತ್ತು ಅದರ ಸ್ಥಳೀಯ ಉತ್ಪಾದನೆಯು ಮೇಕ್ ಇನ್ ಇಂಡಿಯಾ ಮತ್ತು

ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ಯಶಸ್ಸಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ತಿಳಿಸಿದರು. ದೇಶದಲ್ಲಿ ಒಟ್ಟಾರೆ ಎಲೆಕ್ಟ್ರಾನಿಕ್ಸ್ ಪರಿಸರ ವ್ಯವಸ್ಥೆಯು ವೇಗವಾಗಿ ಅಭಿವೃದ್ಧಿ ಹೊಂದುತ್ತಿದೆ ಮತ್ತು ಮೌಲ್ಯವರ್ಧನೆಯನ್ನು ಹಂತ ಹಂತವಾಗಿ ಹೆಚ್ಚಿಸಲಾಗುತ್ತಿದೆ ಎಂದು ಅವರು ಹೇಳಿದರು.

**ಧ್ವನಿ : ಅಶ್ವಿನಿ ವೈಷ್ಣವ್ (೨೮ ಸೆಕೆಂಡ್‌ಗಳು)**

ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಬೆಳವಣಿಗೆ ಶೇಕಡ ೭.೮ರಷ್ಟು ಇದ್ದು, ದೇಶವು ಸ್ಥಿರ ಮತ್ತು ನಾವೀನ್ಯತೆ ಆಧಾರಿತ ಆರ್ಥಿಕತೆ ಎಂಬುದನ್ನು ತೋರಿಸುತ್ತದೆ ಎಂದು ಸಚಿವರು ಹೇಳಿದರು.

<><><><>

ರಕ್ಷಣೆಯಲ್ಲಿ ಸ್ವಾವಲಂಬನೆ ಕೇವಲ ಒಂದು ಆಯ್ಕೆಯಲ್ಲ, ಬದಲಿಗೆ ಅಸ್ತಿತ್ವ ಮತ್ತು ಪ್ರಗತಿಯ ಬದ್ಧತೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಹೇಳಿದ್ದಾರೆ. ರಕ್ಷಣಾ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಸ್ವಾವಲಂಬಿ ಭಾರತವು ತನ್ನ ಕಾರ್ಯತಂತ್ರದ ಸ್ವಾಯತ್ತತೆಯನ್ನು ಕಾಪಾಡಿಕೊಳ್ಳಬಹುದು ಎಂದು ಸರ್ಕಾರ ನಂಬುತ್ತದೆ. ಆಪರೇಷನ್ ಸಿಂಧೂರ್‌ನ ಯಶಸ್ಸು ದೇಶದ ಬೆಳೆಯುತ್ತಿರುವ ಸ್ಥಳೀಯ ರಕ್ಷಣಾ ಸಾಮರ್ಥ್ಯಗಳಿಗೆ ಒಂದು ಉಜ್ವಲ ಉದಾಹರಣೆಯಾಗಿದೆ ಎಂದು ಹೇಳಿದರು. ಸ್ಥಳೀಯ ಉಪಕರಣಗಳನ್ನು ಬಳಸಿಕೊಂಡು ಪಾಕಿಸ್ತಾನದ ಗುರಿಗಳ ಮೇಲೆ ಸಶಸ್ತ್ರ ಪಡೆಗಳು ನಡೆಸಿದ ನಿಖರವಾದ ದಾಳಿಗಳು ದೂರದೃಷ್ಟಿ, ದೀರ್ಘ ಸಿದ್ಧತೆ ಮತ್ತು ಸಮನ್ವಯವಿಲ್ಲದೆ ಯಾವುದೇ ಕಾರ್ಯಾಚರಣೆ ಯಶಸ್ವಿಯಾಗಲು ಸಾಧ್ಯವಿಲ್ಲ ಎಂದು ತೋರಿಸಿದೆ ಎಂದು ಅವರು ಹೇಳಿದರು. ದೇಶದ ಭವಿಷ್ಯದ ಭದ್ರತೆಗೆ ಸುದರ್ಶನ ಚಕ್ರ ಮಿಷನ್ ಒಂದು ದಿಕ್ಕನ್ನೇ ಬದಲಾಯಿಸುವ ಗುರಿಯನ್ನು ಹೊಂದಿದೆ ಎಂದು ಬಣ್ಣಿಸಿದ ಸಚಿವರು, ರಕ್ಷಣಾತ್ಮಕ ಮತ್ತು ಆಕ್ರಮಣಕಾರಿ ತಂತ್ರಜ್ಞಾನಗಳನ್ನು ಬಳಸಿಕೊಂಡು ದೇಶಾದ್ಯಂತದ ನಿರ್ಣಾಯಕ ಸ್ಥಳಗಳಿಗೆ ಸಂಪೂರ್ಣ ವೈಮಾನಿಕ ರಕ್ಷಣೆ ನೀಡುವ ಗುರಿಯನ್ನು ಈ ಮಿಷನ್ ಹೊಂದಿದೆ ಎಂದು ಹೇಳಿದರು.

<><><><>

ಸಂಸತ್ತಿನಲ್ಲಿ ಚರ್ಚೆಯ ಗುಣಮಟ್ಟ ಹಿಂದಿನ ದಿನಗಳಿಗೆ ಹೋಲಿಸಿದರೆ ಈಗ ಕಡಿಮೆಯಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಬೆಂಗಳೂರಿನ ವಕೀಲರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದರು. ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಸಂಸದೀಯ ವ್ಯವಸ್ಥೆ ಎಂಬ ವಿಷಯದ ಕುರಿತು ಮಾತನಾಡಿದ ಅವರು, ಭಾರತೀಯ ಸಂಸದೀಯ ವ್ಯವಸ್ಥೆಯು ವಿಶ್ವದಲ್ಲೇ ವಿಶಿಷ್ಟವಾಗಿದೆ. ಇತರ ದೇಶಗಳಿಗೆ ಹೋಲಿಸಿದರೆ ನಮ್ಮ ಸಂಸದೀಯ ವ್ಯವಸ್ಥೆಯು ಹೆಚ್ಚು ಪ್ರಜಾಪ್ರಭುತ್ವ ಗುಣ ಹೊಂದಿದೆ ಎಂದು ಅವರು ಹೇಳಿದರು. ಒಂದು ದೊಡ್ಡ ದೇಶವಾಗಿ ಭಾರತವು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದೆ. ದೇಶದ ನಾಗರಿಕರು ಸಂಸತ್ ಸದಸ್ಯರನ್ನು ತಮ್ಮ ಸಮಸ್ಯೆಗಳೊಂದಿಗೆ ಭೇಟಿಯಾಗುತ್ತಾರೆ. ಆದ್ದರಿಂದ ಸಂಸತ್ತಿನ ಸದಸ್ಯರು ಜನರ ಪ್ರತಿನಿಧಿಗಳಾಗಿ ಸಂಸತ್ತಿನಲ್ಲಿ ಜನರ ಸಮಸ್ಯೆಗಳಿಗೆ ಧ್ವನಿಯಾಗಿ ಅದಕ್ಕೆ ಪರಿಹಾರವನ್ನು ಕಂಡುಹಿಡಿಯುವ ಜವಾಬ್ದಾರಿ ಹೊಂದಿದ್ದಾರೆ. ಇತ್ತೀಚಿನ ಮಳೆಗಾಲದ ಅಧಿವೇಶನದಲ್ಲಿ, ವಿರೋಧ ಪಕ್ಷಗಳು ಗಲಭೆ ನಡೆಸಿ ಕಲಾಪಕ್ಕೆ ತೊಂದರೆ ಉಂಟು ಮಾಡಿದರೂ ಕೆಲವು

ಉತ್ಪಾದಕ ಚರ್ಚೆ ನಡೆಯಿತು. ಆನ್‌ಲೈನ್ ಜೂಜಿನ ನಿಷೇಧ ಮಸೂದೆ ಮತ್ತು ಹಲವಾರು ಮಸೂದೆಗಳು ಚರ್ಚೆಯಿಲ್ಲದೆ ಅಂಗೀಕರಿಸಲ್ಪಟ್ಟವು. ಪ್ರತಿಯೊಂದು ಮಸೂದೆಯನ್ನು ವಿಸ್ತೃತ ಚರ್ಚೆಯೊಂದಿಗೆ ಅಂಗೀಕರಿಸಬೇಕು. ಆದರೆ ವಿರೋಧ ಪಕ್ಷಗಳು ಯಾವುದೇ ಚರ್ಚೆ ಇಲ್ಲದೇ ಮಸೂದೆಗಳನ್ನು ಅಂಗೀಕರಿಸುವ ಸನ್ನಿವೇಶವನ್ನು ಸೃಷ್ಟಿಸಿತು ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಆರೋಪಿಸಿದರು.

**ಧ್ವನಿ : ಕಿರಣ್ ರಿಜಿಜು**

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><><><>

ಪ್ರಸಕ್ತ ಹಣಕಾಸು ವರ್ಷದ ಏಪ್ರಿಲ್‌ನಿಂದ ಜೂನ್ ತ್ರೈಮಾಸಿಕದಲ್ಲಿ ಭಾರತದ ನೈಜ ಜಿಡಿಪಿ ಶೇಕಡ ೭.೮ರಷ್ಟು ಬೆಳವಣಿಗೆ ದಾಖಲಿಸಿದೆ. ಕಳೆದ ಹಣಕಾಸು ವರ್ಷದ ೪ನೇ ತ್ರೈಮಾಸಿಕದಲ್ಲಿ ಜಿಡಿಪಿ ಶೇಕಡ ೭.೪ ರಷ್ಟಿತ್ತು. ಆದರೆ ಹಿಂದಿನ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಅದು ಶೇಕಡ ೬.೫ ರಷ್ಟಿತ್ತು. ಅಂಕಿ-ಅಂಶಗಳು ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ನಿನ್ನೆ ಬಿಡುಗಡೆ ಮಾಡಿದ ಅಂದಾಜಿನ ಪ್ರಕಾರ, ಇದೇ ಅವಧಿಯಲ್ಲಿ ನಾಮಿನಲ್ ಜಿಡಿಪಿ ಶೇಕಡ ೮.೮ರಷ್ಟು ಬೆಳವಣಿಗೆ ದರ ಕಂಡಿದೆ. ಕಳೆದ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ದಾಖಲಾದ ಶೇಕಡ ೧.೫ರ ಬೆಳವಣಿಗೆ ದರಕ್ಕೆ ಹೋಲಿಸಿದರೆ, ಕೃಷಿ ಮತ್ತು ಸಂಬಂಧಿತ ವಲಯಗಳು ಶೇಕಡ ೩.೭ರ ನೈಜ ಒಟ್ಟು ಮೌಲ್ಯವರ್ಧಿತ ಬೆಳವಣಿಗೆ ದರ ಕಂಡಿದೆ. ಫೆಡರೇಷನ್ ಆಫ್ ಕರ್ನಾಟಕ ಚೇಂಬರ್ಸ್ ಆಫ್ ಕಾಮರ್ಸ್ & ಇಂಡ್ರಸ್ಟ್ರೀಸ್ ಅಧ್ಯಕ್ಷ ಉಲ್ಲಾಸ್ ಕಾಮತ್ ಮಾತನಾಡಿ ಜಿಡಿಪಿ ಹೆಚ್ಚಾಗಬೇಕಾದರೆ ಕೊಳ್ಳುವಿಕೆ ಹೆಚ್ಚಾಗಬೇಕು ಹಾಗೂ ಕೊಳ್ಳುವಿಕೆ ಹೆಚ್ಚಾಗಾಬೇಕಾದರೆ ನೇರ ಮತ್ತು ಪರೋಕ್ಷ ತೆರಿಗೆಗಳು ಕಡಿಮೆಯಾಗಬೇಕು. ಸರ್ಕಾರ ಈ ನಿಟ್ಟಿನಲ್ಲಿ ಕ್ರಮಕೈಗೊಂಡಿದ್ದು, ಪ್ರಸಕ್ತ ಸಾಲಿನಲ್ಲಿ ಜಿಡಿಪಿ ಹೆಚ್ಚಾಗುವ ಸಾಧ್ಯತೆ ಎಂದು ತಿಳಿಸಿದ್ದಾರೆ.

**ಧ್ವನಿ : ಉಲ್ಲಾಸ್ ಕಾಮತ್**

<><><><>

ಲೋಕಸಭೆಯ ಕಲಾಪಗಳನ್ನು ಅಸ್ತವ್ಯಸ್ತಗೊಳಿಸುವ ಪ್ರಯತ್ನಗಳು ನಡೆಯುತ್ತಿವೆ, ಇದು ಪ್ರಜಾಪ್ರಭುತ್ವಕ್ಕೆ ಒಳ್ಳೆಯದಲ್ಲ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಇಂದು ಹೇಳಿದ್ದಾರೆ. ಇಂದು ಭುವನೇಶ್ವರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಸಭೆ ಮತ್ತು ಶಾಸಕಾಂಗ ಸಭೆಗಳಲ್ಲಿಯೂ ಇಂತಹ ಪರಿಸ್ಥಿತಿ

ಕಂಡುಬರುತ್ತಿದ್ದು, ರಾಜಕೀಯ ಪಕ್ಷಗಳು ವಿಭಿನ್ನ ಆಲೋಚನೆಗಳು ಮತ್ತು ಅಭಿಪ್ರಾಯಗಳನ್ನು ಹೊಂದಿರುತ್ತವೆ ಮತ್ತು ಆಡಳಿತ ಮತ್ತು ವಿರೋಧ ಪಕ್ಷಗಳ ನಾಯಕರು ವಿವಿಧ ವಿಷಯಗಳ ಬಗ್ಗೆ ಒಪ್ಪುತ್ತಾರೆ ಮತ್ತು ಭಿನ್ನಾಭಿಪ್ರಾಯ ಹೊಂದಿರುತ್ತಾರೆ ಎಂದು ಹೇಳಿದರು. ಆದರೂ ಜನರು ಬಹಳಷ್ಟು ಭರವಸೆಗಳು ಮತ್ತು ಆಕಾಂಕ್ಷೆಗಳೊಂದಿಗೆ ಸದಸ್ಯರನ್ನು ಕಳುಹಿಸಿರುವುದರಿಂದ ಇಂತಹ ನಡವಳಿಕೆ ಸರಿಯಲ್ಲ ಎಂದು ಅವರು ಸಂಸತ್ತಿನ ಕೊನೆಯ ಮಳೆಗಾಲದ ಅಧಿವೇಶನವನ್ನು ಉಲ್ಲೇಖಿಸಿ ಹೇಳಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>